ಜೋಗನ ಕೆರೆ ಕೊಳಚೆ ಪ್ರದೇಶದ ನಿವಾಸಿಗಳಿಗೆ JNNURM ಯೋಜನೆಯಡಿಯಲ್ಲಿ ಮುಂದಿನ ಸಾಲಿನಲ್ಲಿ ಪುನರ್ ವಸತಿ ಸೌಕರ್ಯ ಒದಗಿಸಲು ಕ್ರಮ ವಹಿಸಲಾಗಿದೆ.

ಸೌತ್ ಆಫ್ ಕುಂಬಾರ್ ಕೊಪ್ಪಲು ಪಿ.ಕೆ. ಸ್ಯಾನಿಟೋರಿಯಂ ಹಿಂಭಾಗದ 2ನೇ ಹಂತದ ಕೊಳಚೆ ಪ್ರದೇಶದ ನಿವಾಸಿಗಳಿಗೆ JNNURM ಯೋಜನೆಯಡಿಯಲ್ಲಿ ಮುಂದಿನ ಸಾಲಿನಲ್ಲಿ ಪುನರ್ ವಸತಿ ಸೌಕರ್ಯ ಒದಗಿಸಲು ಕ್ರಮ ವಹಿಸಲಾಗಿದೆ.

ಗೋಕುಲಂ 3ನೇ ಹಂತ ಕೊಳಚೆ ಪ್ರದೇಶದ ನಿವಾಸಿಗಳಿಗೆ JNNURM ಯೋಜನೆಯಡಿಯಲ್ಲಿ ಮುಂದಿನ ಸಾಲಿನಲ್ಲಿ ಪುನರ್ ವಸತಿ ಸೌಕರ್ಯ ಒದಗಿಸಲು ಕ್ರಮ ವಹಿಸಲಾಗಿದೆ.

ಮಹೇಶ್ವರಿ ಬಡಾವಣೆ ಡೋಂಗ್ರಿ ಕಾಲೋನಿ ಕೊಳಚೆ ಪ್ರದೇಶದ ನಿವಾಸಿಗಳಿಗೆ JNNURM ಯೋಜನೆಯಡಿಯಲ್ಲಿ ಮುಂದಿನ ಸಾಲಿನಲ್ಲಿ ಪುನರ್ ವಸತಿ ಸೌಕರ್ಯ ಒದಗಿಸಲು ಕ್ರಮ ವಹಿಸಲಾಗಿದೆ.

ಕಾಫಿ ಬೋರ್ಡ್ ಹಿಂಭಾಗ ಕೊಳಚೆ ಪ್ರದೇಶದ ನಿವಾಸಿಗಳಿಗೆ RLHP ಸಂಸ್ಥೆಯೊಂದಿಗೆ ಪುನರ್ವಸತಿ ಸೌಲಭ್ಯ ಕಲ್ಪಿಸಿ ಮೂಲಭೂತ ಸೌಕರ್ಯ ಒದಗಿಸಲಾಗಿದೆ.

ಶ್ರೀ ಶಂಕರಲಿಂಗೇಗೌಡ ಹೆಚ್. ಎಸ್.(ಚಾಮರಾಜ)139(97)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಮೈಸೂರಿನ (ಸರ್ಕಾರಿ) ಮಹಾರಾಜ ಪದವಿ ಪೂರ್ವ ಕಾಲೇಜಿನಲ್ಲಿ ಕಂಪ್ಯೂಟರ್ ಸೈನ್ಸ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ, ಎಷ್ಟು ವಿಭಾಗಗಳಿವೆ ತಿಳಿಸುವುದು.

ಅ) ಇಲ್ಲಿ ಕಂಪ್ಯೂಟರ್ ಸೈನ್ಸ್ ಅಧ್ಯಾಪಕರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಕಂಪ್ಯೂಟರ್ ಸೈನ್ಸ್ ಅಧ್ಯಾಪಕರಿಲ್ಲದೆ ಇಲ್ಲಿನ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಸೈನ್ಸ್ ಪಾಠಪ್ರವಚನೆಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಇಲ್ಲಿಗೆ ಅಗತ್ಯವಿರುವಷ್ಟು ಕಂಪ್ಯೂಟರ್ ಸೈನ್ಸ್ ಅಧ್ಯಾಪಕರನ್ನು ಕೂಡಲೇ ನೇಮಿಸಲು ಎಷ್ಟು ಸಮಯ ಬೇಕಾಗುವುದು.

ಶ್ರೀ ಬಸವರಾಜ ಎಸ್. ಹೊರಟ್ಟಿ

ಅ) ಈ ಕಾಲೇಜಿನಲ್ಲಿ ಪ್ರಥಮ ಪಿಯುಸಿಯ ಪಿ.ಸಿ.ಎಂ.ಬಿ.(ವಿಜ್ಞಾನ) ಮತ್ತು ಇ.ಸಿ.ಬಿ.ಎ(ವಾಣಿಜ್ಯ) ಸಂಯೋಜನೆಯಲ್ಲಿ 75 ವಿದ್ಯಾರ್ಥಿಗಳಿದ್ದು ಹಾಗೂ ದ್ವಿತೀಯ ಪಿಯುಸಿಯಲ್ಲಿ 70 ವಿದ್ಯಾರ್ಥಿಗಳಿದ್ದು, 02 ವಿಭಾಗಗಳಲ್ಲಿ 145 ವಿದ್ಯಾರ್ಥಿಗಳಿರುತ್ತಾರೆ.

ಆ) ಬಂದಿದೆ.

ಇ) ಬಂದಿದೆ.

ಈ) 10 ಕಂಪ್ಯೂಟರ್ ಸೈನ್ಸ್ ಉಪನ್ಯಾಸಕರನ್ನು ನೇಮಕ ಮಾಡುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ದಿನಾಂಕ: 5–7–2007ರಂದು ಅಧಿಸೂಚನೆ ಹೊರಡಿಸಲಾಗಿದೆ. ಲೋಕ ಸೇವಾ ಆಯೋಗವು ಆಯ್ಕೆ ಪಟ್ಟಿಯನ್ನು ನೀಡಿದ ಕೂಡಲೇ ನೇಮಕಾತಿ ಮಾಡಲಾಗುವುದು.